ಅ) ಹಾಲಿ ಇರುವ ಮಂಗಳೂರು ಕೇಂದ್ರ ಕಾರಾಗೃಹವನ್ನು ದುರಸ್ತಿಗೊಳಿಸಲು ಕಾರಾಗೃಹಗಳ ಆಧುನೀಕರಣ ಯೋಜನೆ ಅಡಿಯಲ್ಲಿ ಡೀಸೆಲ್ ಜನರೇಟರ್ ಸೆಟ್ಟುಗಳು, ಲೋಹಶೋಧಕಗಳು, ಮೋಟಾರ್ ಸೈಕಲ್‌ಗಳು, ದೂರವಾಣಿ ಇವುಗಳನ್ನು ನೀಡಲಾಗಿದೆ. ನೀರು ಮತ್ತು ವಿದ್ಯುತ್ ಪೂರೈಕೆ, ಒಳಚರಂಡಿ ವ್ಯವಸ್ಥೆ ಕಟ್ಟಡಗಳ ದುರಸ್ತಿ ಇತ್ಯಾದಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ. ಆರೋಗ್ಯ ರಕ್ಷಣೆಗಾಗಿ ಆಂಬ್ಯುಲೆನ್ಸ್ ವಾಹನ, ಮಿನಿ ಕ್ಲಿನಿಕಲ್ ಲ್ಯಾಬೊರೇಟರಿ, ಎಕ್ಸರೆ ಯೂನಿಟ್ ಮುಂತಾದವುಗಳನ್ನು ಒದಗಿಸಿದೆ. ಅಲ್ಲಿ ಇರುವ ಸ್ಥಳಾವಕಾಶವನ್ನು ಹೆಚ್ಚಿಸುವ ಸಂಬಂಧ ಯೋಜನೆಯನ್ನು ತಯಾರಿಸಲಾಗುತ್ತಿದೆ.

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸಾಫ್ಟ್‌ವೇರ್ ಪಾರ್ಕ್‌ಗಳು.

21 (223) ಶ್ರೀ ಎನ್. ಯೋಗೀಶ್ ಭಟ್ (ಮಂಗಳೂರು) :— ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಭೂತ ಸೌಲಭ್ಯ ಅಭಿವೃದ್ಧಿ ಯೋಜನೆಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಹಾಗೂ ಮಂಗಳೂರಿನಲ್ಲಿ ಸಾಫ್ಟ್‌ವೇರ್ ಪಾರ್ಕ್‌ಗಳನ್ನು ಅಭಿವೃದ್ಧಿಪಡಿಸಲು ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಆ) ಇದಕ್ಕಾಗಿ ಎಷ್ಟು ಸ್ಥಳವನ್ನು ಕಾದಿಸಿರಿಸಲಾಗಿದೆ?

ಇ) ಈ ಬಗೆ ಎಷ್ಟು ಸಂಸ್ಥೆಗಳೊಂದಿಗೆ ಸರ್ಕಾರದವರು ಒಪ್ಪಂದ ಮಾಡಿಕೊಂಡಿದ್ದಾರೆ ಹಾಗೂ ಇದಕ್ಕೆ ತಗಲಬಹುದಾದ ವೆಚ್ಚ ಎಷ್ಟು?

ಶ್ರೀ ಬಿ.ಎಲ್. ಶಂಕರ್ (ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಭೂತ ಸೌಲಭ್ಯ ಅಭಿವೃದ್ಧಿ ಯೋಜನೆಗಳ ಸಚಿವರು) :—

ಅ) ಮಂಗಳೂರಿನಲ್ಲಿನ ಸಾಫ್ಟ್‌ವೇರ್ ಟೆಕ್ನಾಲಜಿ ಪಾರ್ಕ್‌ನ್ನು ಮಾಹಿತಿ ತಂತ್ರಜ್ಞಾನದ ಕಾರ್ಯನೀತಿಯಲ್ಲಿ ಕರ್ನಾಟಕ ಸರ್ಕಾರವು ಘೋಷಿಸಿದಂತೆ ಮಾಡಲಾಗುತ್ತಿದೆ. ಈ ದಿಶೆಯಲ್ಲಿ ವರ್ಕ್‌ಶಾಪ್‌ಗಳ ಮತ್ತು ಸೆಮಿನಾರ್‌ಗಳನ್ನು ಮಾಡಲಾಗಿದ್ದು, ಜಾಗದ ಪರಿಶೀಲನೆಯನ್ನು ಮಾಡಿಲಾಗಿದೆ.

ಆ) ಈ ಸಾಫ್ಟ್‌ವೇರ್ ಟೆಕ್ನಾಲಜಿ ಪಾರ್ಕ್‌ನ್ನು ಸ್ಥಾಪಿಸಲು ಬೇಕಾದ ಜಾಗವನ್ನು ಮಂಗಳೂರಿನಲ್ಲಿ ಸೇರಿಚೈಲು ಹಳ್ಳಿಯಲ್ಲಿ 4 ಎಕರೆ 75 ಸೆಂಟನ್ನು ಸೂಕ್ತವೆಂದು ಪರಿಗಣಿಸಲಾಗಿದೆ. ಅದೇ ಜಾಗದಲ್ಲಿ 13: 88ಎಕರೆ ಸಾಫ್ಟ್‌ವೇರ್ ಟೆಕ್ನಾಲಜಿ ಪಾರ್ಕ್‌ನ್ನು ಸ್ಥಾಪಿಸಲು ಬೇಕೆಂದು ಪ್ರಸ್ತಾವನೆಯನ್ನು ಕಳುಹಿಸಲಾಗಿದೆ. ಇದರ ಸ್ಥಾಪನಾ ಚಟುವಟಿಕೆಯನ್ನು ಮಾಡಲಾಗುತ್ತಿದೆ.

ಇ) ಕರ್ನಾಟಕ ಸರ್ಕಾರ ಕಿಯಾನಿಕ್ಸ್‌ಗೆ ಮಂಗಳೂರಿನಲ್ಲಿ ಸಾಫ್ಟ್‌ವೇರ್ ಟೆಕ್ನಾಲಜಿ ಪಾರ್ಕ್‌ನ್ನು ಸ್ಥಾಪಿಸಲು ಒಪ್ಪಿಗೆ ನೀಡಿದ್ದಾರೆ. ಈ ಸಾಫ್ಟವೇರ್ ಟೆಕ್ನಾಲಜಿ ಪಾರ್ಕ್‌ನಲ್ಲಿ ಆರ್ಸ್ಟೇಷನ್‌ನ್ನು ಕೂಡ ಸ್ಥಾಪಿಸಲು ಉದ್ದೇಶಿಸಿದೆ ಮತ್ತು ಇದರಿಂದ ರಫ್ತು ಹೆಚ್ಚುವುದು. ಇದರ ಯೋಜನಾ ವೆಚ್ಚ ಸುಮಾರು 3.5 ಕೋಟಿ ರೂ.ಗಳಾಗುವುದು. ಈ ವೆಚ್ಚವನ್ನು ಕರ್ನಾಟಕ ಸರ್ಕಾರದ ಅನುದಾನದಿಂದ ಪಡೆಯುವ ಯೋಜನೆಯಿದೆ.

ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿಯಿಂದ ಮಂಗಳೂರು ಕ್ಷೇತ್ರಕ್ಕೆ ಬಿಡುಗಡೆಯಾದ ಹಣ.

22(227) ಶ್ರೀ ಎನ್. ಯೋಗೀಶ್ ಭಟ್ (ಮಂಗಳೂರು) :— ಮಾನ್ಯ ಪ್ರದೇಶಾಭಿವೃದ್ಧಿ ಮತ್ತು ಕಾಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿಯಿಂದ ಮಂಗಳೂರು ಕ್ಷೇತ್ರಕ್ಕೆ ಹಣ ಬಿಡುಗಡೆಯಾಗದೇ ಇರುವುದರಿಂದ ಅಭಿವೃದ್ಧಿ ಚಟುವಟಿಕೆಗಳು ಕುಂಠಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಹಣ ಬಿಡುಗಡೆ ಮಾಡಲು ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಶ್ರೀ ಕೆ. ವೆಂಕಟೇಶ್ (ಪ್ರದೇಶಾಭಿವೃದ್ಧಿ ಮತ್ತು ಕಾಡಾ ರಾಜ್ಯ ಸಚಿವರು) :—

ಅ) ಬಂದಿಲ್ಲ.

ಆ) ಉದ್ಭವಿಸುವುದಿಲ್ಲ.

ಮಂಗಳೂರು ನಗರದಲ್ಲಿ ವಿದ್ಯುತ್ ವಿತರಣಾ ಕೇಂದ್ರ ಹಾಗೂ ವಿತರಣಾ ವ್ಯವಸ್ಥೆಯಲ್ಲಿ ಸುಧಾರಣೆ.

23 (226) ಶ್ರೀ ಎನ್. ಯೋಗೀಶ್ ಭಟ್ (ಮಂಗಳೂರು) :— ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಗಳೂರು ನಗರದ ವಿದ್ಯುತ್ ವಿತರಣಾ ಕೇಂದ್ರ ಹಾಗೂ ವಿತರಣಾ ವ್ಯವಸ್ಥೆ ಸುಧಾರಿಸುವ ಬಗ್ಗೆ ಸರ್ಕಾರದವರು ಕೈಗೊಂಡ ಕ್ರಮಗಳೇನು? ಹಾಗೂ ಇದಕ್ಕೆ ತಗುಲಿದ ವೆಚ್ಚವೆಷ್ಟು?